ಛೇರ್ಮನ್:– ದಯವಿಟ್ಟು ಮಾನ್ಯ ಉಪ ಮುಖ್ಯಮಂತ್ರಿಗಳು ಹೇಳುವುದನ್ನು ಕೇಳಿ.

ಶ್ರೀ ಸಿದ್ದರಾಮಯ್ಯ:– ಮಾನ್ಯ ಅಧ್ಯಕ್ಷರೆ, ಏನು additional resources ಬಂದಿದೆಯೋ, ಅದನ್ನೆಲ್ಲಾ ನಾವು ಬಡವರ ಪರವಾಗಿ ಇರತಕ್ಕಂಥ ಕಾರ್ಯಕ್ರಮಗಳಿಗೆ ಕೊಟ್ಟಿದ್ದೇವೆ. ಈಗ 100 ಕೋಟಿ ರೂಪಾಯಿಗಳನ್ನು ರಸ್ತೆಗಳ ಅಭಿವೃದ್ಧಿಗೆಂದು ಕೊಟ್ಟಾಗ ರಸ್ತೆಗಳ ಅಭಿವೃದ್ಧಿಯ ಕೆಲಸವನ್ನು ತಾನೇ ಮಾಡುವುದು. Bridges ಗೆ additional ಆಗಿ 100 ಕೋಟಿ ರೂ.ಗಳನ್ನು ಕೊಟ್ಟರೆ, ಅದೂ ರಸ್ತೆಗಳ ಅಭಿವೃದ್ಧಿಗಾಗಿ ಕೊಟ್ಟಂತೆ ತಾನೇ? 400 ಕೋಟಿ ರೂಪಾಯಿಗಳ ಸಬ್ಸಿಡಿ ಕೊಟ್ಟರೆ, ರೈತರ ಪಂಪ್‌ಸೆಟ್‌ಗಳಿಗೆಲ್ಲಾ ಕೊಟ್ಟಂತಾಗಲಿಲ್ಲವೇ? ಇದರಿಂದ ಹಳ್ಳಿಯವರಿಗೆಲ್ಲಾ ಕೊಟ್ಟಂತಾಗಲಿಲ್ಲವೇ? ಆದ್ದರಿಂದ 60 ಕೋಟಿ ರೂಪಾಯಿಗಳನ್ನು ನಾನು ಮತ್ತೆ ಈಗ additional ಆಗಿ ಗ್ರಾಮ ಪಂಚಾಯಿತಿಗಳ ರಸ್ತೆಗಳಿಗೇ ಕೊಡಬೇಕೆಂದು ತಿರ್ಮಾನ ಮಾಡಿದ್ದೇನೆ. ಅಲ್ಲಿ ಎಂ.ಎಲ್.ಎ.ಗಳು ಹೇಳಿದ ರೀತಿಯಲ್ಲೇ ಕೆಲಸಗಳಾಗುತ್ತವೆ. ಅದರಲ್ಲಿ 20 ಕೋಟಿ ರೂಪಾಯಿಗಳು ಇದಕ್ಕೆ ಹೋಗುತ್ತದೆ, 40 ಕೋಟಿ ರೂಪಾಯಿಗಳು ಹೊಸ ಕೆಲಸಕ್ಕೆ ಹೋಗುತ್ತದೆ. ಈಗ ನಾವು ಫೆಬ್ರವರಿ ತಿಂಗಳಿಗೆ ಬಂದಿದ್ದೇವೆ. ಮಾರ್ಚ್ ತಿಂಗಳಿನಲ್ಲಿ ಮುಂದಿನ ಸಾಲಿನ ಬಜೆಟ್ ಅನ್ನು ನಾನು ಮಂಡಿಸುತ್ತಿದ್ದೇನೆ. ಮುಂದಿನ ಬಜೆಟ್ ಅನ್ನು ಮಂಡಿಸುವಾಗ, ಮಾನ್ಯ ಎಲ್ಲಾ ಸದಸ್ಯರ ಅಭಿಪ್ರಾಯಗಳನ್ನು, ಅವರ ಭಾವನೆಗಳನ್ನೆಲ್ಲಾ ಗಮನದಲ್ಲಿಟ್ಟುಕೊಂಡು, ಅವರು ಹೇಳಿದಂತಹ ವಿಚಾರಗಳನ್ನು ಗಮನದಲ್ಲಿಟ್ಟುಕೊಂಡು, ನಾನು ತೀರ್ಮಾನ ಮಾಡುತ್ತೇನೆ ಅನ್ನತಕ್ಕಂಥದ್ದನ್ನು ತಮ್ಮ ಮೂಲಕ ಅವರೆಲ್ಲರಿಗೂ ತಿಳಿಸಲಿಕ್ಕೆ ಬಯಸುತ್ತಿದ್ದೇನೆ. ಆದ್ದರಿಂದ ಈ ಪೂರಕ ಅಂದಾಜುಗಳಿಗೆ ಒಪ್ಪಿಗೆ ಕೊಡಬೇಕೆಂದು ಮಾನ್ಯ ಸದಸ್ಯರಲ್ಲಿ ಮನವಿ ಮಾಡಿಕೊಳ್ಳುತ್ತೇನೆ.

(ಗೊಂದಲ)

ಶ್ರೀ ಸಿದ್ದರಾಮಯ್ಯ:– ಮಾನ್ಯ ರಾಜಣ್ಣನವರು ಹೇಳಿರತಕ್ಕಂಥ ಎಸ್.ಸಿ. ಃ ಎಸ್.ಟಿ. ಹಾಸ್ಟೆಲ್‌ಗಳಿಗೆ ಸ್ಕಾಲರ್‌ಶಿಪ್ ಏನು ಬಾಕಿ ಉಳಿದಿದೆಯೋ, ಅದನ್ನು ಕೊಡಿಸತಕ್ಕಂಥ ಕೆಲಸವನ್ನು ಮಾಡುತ್ತೇನೆ.

ಮಾನ್ಯ ಅಧ್ಯಕ್ಷರೆ, ದಿನಾಂಕ 31.3.2005ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬರುವ ಅಭಿಯಾಚನೆಗಳ ಕ್ರಮಾಂಕ 1, 3ರಿಂದ 10, 13, 15, 17, 18, 20, 21, 22, ಹಾಗೂ 27 ಇವುಗಳಿಗೆ ಸಂಬಂಧಿಸಿದಂತೆ, ಸಂದಾಯವಾಗುವ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ಹಾಗೂ ಬಂಡವಾಳ ಖಾತೆಯಲ್ಲಿ ಮಂಜೂರು ಮಾಡಿದ ಮೊಬಲಗನ್ನೂ ಸೇರಿ, ಬೇಡಿಕೆಗಳ ಪಟ್ಟಿಯಲ್ಲಿ ನಮೂದಿಸಿದ ಮೊಬಲಗಿಗೆ ಮೀರದ ಮೊತ್ತವನ್ನು ಈ ಸಭೆಯು ಮಂಜೂರು ಮಾಡಬೇಕೆಂದು ಕೋರುತ್ತೇನೆ.

ಛೇರ್ಮನ್:– 2004–05ನೇ ಸಾಲಿನ ಪೂರಕ ಅಂದಾಜುಗಳ (ಎರಡನೇ ಕುಂತು) ಬೇಡಿಕೆಗಳ ಪ್ರಸ್ತಾವಗಳನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ.

"ದಿನಾಂಕ 31.3.2005ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬರುವ ಅಭಿಯಾಚನೆಗಳ ಕ್ರಮಾಂಕ 1, 3ರಿಂದ 10, 13, 15, 17, 18, 20, 21, 22 ಹಾಗೂ 27 ಇವುಗಳಿಗೆ ಸಂಬಂಧಿಸಿದಂತೆ, ಸಂದಾಯವಾಗುವ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ಹಾಗೂ ಬಂಡವಾಳ ಖಾತೆಯಲ್ಲಿ ಮಂಜೂರು ಮಾಡಿದ ಮೊಬಲಗನ್ನೂ ಸೇರಿ, ಬೇಡಿಕೆಗಳ ಪಟ್ಟಿಯಲ್ಲಿ ನಮೂದಿಸಿದ ಮೊಬಲಗಿಗೆ ಮೀರದ ಮೊತ್ತವನ್ನು ಈ ಸಭೆಯು ಮಂಜೂರು ಮಾಡುತ್ತದೆ"

ಪ್ರಸ್ತಾವಗಳನ್ನು ಅಂಗೀಕರಿಸಲಾಯಿತು ಮತ್ತು 2004–05ನೆಯ ಪೂರಕ ಅಂದಾಜುಗಳ (ಎರಡನೇ ಕಂತು) ಬೇಡಿಕೆಗಳನ್ನು ಮಂಜೂರು ಮಾಡಲಾಯಿತು.

(ಮಾನ್ಯ ಛೇರ್ಮನ್‌ರವರ ಆದೇಶದ ಮೇರೆಗೆ ಮಂಜೂರಾದ 2004–05ನೆಯ ಪೂರಕ ಅಂದಾಜುಗಳ (ಎರಡನೇ ಕಂತು) ಬೇಡಿಕೆಗಳ ಪ್ರಸ್ತಾವಗಳನ್ನು ಈ ಕೆಳಗಿನಂತೆ ನಮೂದಿಸಲಾಗಿದೆ)

1. 2005ನೇ ಮಾರ್ಚ್ 31ರ ಅಂತ್ಯದೊಳಗಾಗಿ ' ಕೃಷಿ ಮತ್ತು ತೋಟಗಾರಿಕೆ ' ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿರುವುದರಿಂದ ರಾಜ್ಯಸ್ವ ಲೆಕ್ಕದಲ್ಲಿ 540.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

3. 2005ನೇ ಮಾರ್ಚ್ 31ರ ಅಂತ್ಯದೊಳಗಾಗಿ ' ಆರ್ಥಿಕ ' ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿರುವುದರಿಂದ ರಾಜಸ್ವ ಲೆಕ್ಕದಲ್ಲಿ 3118.03 ಲಕ್ಷ ರೂ.ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ 575.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

4. 2005ನೇ ಮಾರ್ಚ್ 31ರ ಅಂತ್ಯದೊಳಗಾಗಿ ' ಸಿ.ಆ.ಸು.ಇ. ' ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿರುವುದರಿಂದ ರಾಜಸ್ವ ಲೆಕ್ಕದಲ್ಲಿ 5.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

5. 2005ನೇ ಮಾರ್ಚ್ 31ರ ಅಂತ್ಯದೊಳಗಾಗಿ ' ಒಳಾಡಳಿತ ಮತ್ತು ಸಾರಿಗೆ ' ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿರುವುದರಿಂದ ರಾಜಸ್ವ ಲೆಕ್ಕದಲ್ಲಿ 200.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

6. 2005ನೇ ಮಾರ್ಚ್ 31ರ ಅಂತ್ಯದೊಳಗಾಗಿ ' ಮೂಲಭೂತ ಸೌಲಭ್ಯಗಳ ಅಭಿವೃದ್ಧಿ ಇಲಾಖೆ ' ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿರುವುದರಿಂದ ಬಂಡವಾಳ ಲೆಕ್ಕದಲ್ಲಿ 285.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

7. 2005ನೇ ಮಾರ್ಚ್ 31ರ ಅಂತ್ಯದೊಳಗಾಗಿ ' ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ' ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿರುವುದರಿಂದ ರಾಜಸ್ವ ಲೆಕ್ಕದಲ್ಲಿ 6000.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

8. 2005ನೇ ಮಾರ್ಚ್ 31ರ ಅಂತ್ಯದೊಳಗಾಗಿ ' ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ' ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿರುವುದರಿಂದ ರಾಜಸ್ವ ಲೆಕ್ಕದಲ್ಲಿ 398.57 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

9. 2005ನೇ ಮಾರ್ಚ್ 31ರ ಅಂತ್ಯದೊಳಗಾಗಿ ' ಸಹಕಾರ ' ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿರುವುದರಿಂದ ರಾಜಸ್ವ ಲೆಕ್ಕದಲ್ಲಿ 159.74 ಲಕ್ಷ ರೂ.ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ 888.50 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಗಲನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

10. 2005ನೇ ಮಾರ್ಚ್ 31ರ ಅಂತ್ಯದೊಳಗಾಗಿ ' ಸಮಾಜ ಕಲ್ಯಾಣ ' ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿರುವುದರಿಂದ ರಾಜಸ್ವ ಲೆಕ್ಕದಲ್ಲಿ 2229.10 ಲಕ್ಷ ರೂ.ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ 1700.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

13. 2005ನೇ ಮಾರ್ಚ್ 31ರ ಅಂತ್ಯದೊಳಗಾಗಿ 'ಆಹಾರ ಮತ್ತು ನಾಗರಿಕ ಸರಬರಾಜು' ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿರುವುದರಿಂದ ರಾಜಸ್ವ ಲೆಕ್ಕದಲ್ಲಿ 30000.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

15. 2005ನೇ ಮಾರ್ಚ್ 31ರ ಅಂತ್ಯದೊಳಗಾಗಿ ' ಮಾಹಿತಿ ತಂತ್ರಜ್ಞಾನ ' ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿರುವುದರಿಂದ ರಾಜಸ್ವ ಲೆಕ್ಕದಲ್ಲಿ 26.62 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

17. 2005ನೇ ಮಾರ್ಚ್ 31ರ ಅಂತ್ಯದೊಳಗಾಗಿ ' ಶಿಕ್ಷಣ ' ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿರುವುದರಿಂದ ರಾಜಸ್ವ ಲೆಕ್ಕದಲ್ಲಿ 200.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

18. 2005ನೇ ಮಾರ್ಚ್ 31ರ ಅಂತ್ಯದೊಳಗಾಗಿ ' ವಾಣಿಜ್ಯ ಮತ್ತು ಕೈಗಾರಿಕೆ 'ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿರುವುದರಿಂದ ರಾಜಸ್ವ ಲೆಕ್ಕದಲ್ಲಿ 7865.76 ಲಕ್ಷ ರೂ.ಗಳು ಮತ್ತು ಬಂಡವಾಳ ವೆಚ್ಚದಲ್ಲಿ 4847.00 ಲಕ್ಷ ರೂ.ಗಳಿಗೆ ಮೀರಿದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

20. 2005ನೇ ಮಾರ್ಚ್ 31ರ ಅಂತ್ಯದೊಳಗಾಗಿ ' ಲೋಕೋಪಯೋಗಿ ' ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿರುವುದರಿಂದ ರಾಜಸ್ವ ಲೆಕ್ಕದಲ್ಲಿ 10105.43 ಲಕ್ಷ ರೂ.ಗಳು ಮತ್ತು ಬಂಡವಾಳ ವೆಚ್ಚದಲ್ಲಿ 18165.95 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು

21. 2005ನೇ ಮಾರ್ಚ್ 31ರ ಅಂತ್ಯದೊಳಗಾಗಿ ' ಜಲಸಂಪನ್ಮೂಲ ' ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿರುವುದರಿಂದ ರಾಜಸ್ವ ಲೆಕ್ಕದಲ್ಲಿ 142.70 ಲಕ್ಷ ರೂ.ಗಳು ಮತ್ತು ಬಂಡವಾಳ ಲೆಕ್ಕದಲ್ಲಿ 5345.50 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

22. 2005ನೇ ಮಾರ್ಚ್ 31ರ ಅಂತ್ಯದೊಳಗಾಗಿ ' ಆರೋಗ್ಯ ಮತ್ತು ಕುಟುಂಬ ಕಲ್ಯಾಣ ' ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿರುವುದರಿಂದ ರಾಜಸ್ವ ಲೆಕ್ಕದಲ್ಲಿ 1022.12 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

27. 2005ನೇ ಮಾರ್ಚ್ 31ರ ಅಂತ್ಯದೊಳಗೆ ' ಕಾನೂನು ' ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿರುವುದರಿಂದ ರಾಜಸ್ವ ಲೆಕ್ಕದಲ್ಲಿ 50.00 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

13. ಶಾಸನ ರಚನೆ

6) ವಿಧೇಯಕದ ಮಂಡನೆ, ಪರ್ಯಾಲೋಚನೆ ಮತ್ತು ಅಂಗೀಕಾರ

ಕರ್ನಾಟಕ ಧನವಿನಿಯೋಗ ವಿಧೇಯಕ, 2005

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಸಿದ್ದರಾಮಯ್ಯ (ಉಪಮುಖ್ಯಮಂತ್ರಿಯವರು):– ಮಾನ್ಯ ಅಧ್ಯಕ್ಷರೆ, "2005ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ."

ಛೇರ್ಮನ್: ಪ್ರಸ್ತಾವ ಏನೆಂದರೆ '2005ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು'

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಸಿದ್ದರಾಮಯ್ಯ (ಉಪಮುಖ್ಯಮಂತ್ರಿಯವರು):– ಮಾನ್ಯ ಅಧ್ಯಕ್ಷರೆ, "2005ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ."

ಛೇರ್ಮನ್: ವಿಧೇಯಕವನ್ನು ಮಂಡಿಸಲಾಗಿದೆ.

x (ಅನುಬಂಧ–II)

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಸಿದ್ದರಾಮಯ್ಯ (ಉಪಮುಖ್ಯಮಂತ್ರಿಯವರು) ಮಾನ್ಯ ಅಧ್ಯಕ್ಷರೆ, " 2005ರ, ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ."

ಪ್ರಸ್ತಾವವನ್ನು ಮಂಡಿಸಲಾಯಿತು

ಈಗ ಪ್ರಸ್ತಾವವನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಛೇರ್ಮನ್: ಪ್ರಸ್ತಾವ ಏನೆಂದರೆ '2005ರ ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಪರ್ಯಾಲೋಚಿಸುವುದು'

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ರಿಂದ 3ರವರೆಗೆ

ಛೇರ್ಮನ್: ಪ್ರಶ್ನೆ ಏನೆಂದರೆ: "ಖಂಡ 2 ರಿಂದ 3ರವರೆಗೆ, ಎರಡೂ ಸೇರಿದಂತೆ, ಈ ವಿಧೇಯಕದ ಅಂಗವಾಗಿರುತ್ತದೆ'